# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ

| ಭಾಗ – ೧<br>Part – I | ಬೆಂಗಳೂರು, ಮಂಗಳವಾರ, ೩೧, ಮಾರ್ಚ್, ೨೦೨೬(ಚೈತ್ರ, ೧೦, ಶಕವರ್ಷ, ೧೯೪೮)<br>BENGALURU, TUESDAY, 31, MARCH, 2026(CHAITHRA, 10, SHAKAVARSHA, 1948) | ನಂ. ೨೫೨<br>No. 252 |
|---|---|---|


**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 3 ಸೇನೌವ 2026

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಡಾ|| ಬಿ.ಆರ್.ಅಂಬೇಡ್ಕರ್ ವೀದಿ
ಬೆಂಗಳೂರು, ದಿನಾಂಕ:30.03.2026

## ಸುತ್ತೋಲೆ

**ವಿಷಯ:** ರಾಜ್ಯ ಸರ್ಕಾರಿ ನೌಕರರ ವರ್ಗಾವಣೆಗೆ ಸಂಬಂಧಿಸಿದಂತೆ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು W.P. No.35777/2025 ರಲ್ಲಿ ನೀಡಿರುವ ತೀರ್ಪನ್ನು ಅನುಷ್ಠಾನಗೊಳಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 14 ಸೇನೌವ 2025, ದಿನಾಂಕ: 12.05.2025.

****

2025-26ನೇ ಸಾಲಿನಲ್ಲಿ ರಾಜ್ಯ ಸರ್ಕಾರಿ ನೌಕರರ ವರ್ಗಾವಣೆಗಳ ಸಂಬಂಧ ಉಲ್ಲೇಖಿತ ದಿನಾಂಕ:12.05.2025ರ ಸರ್ಕಾರಿ ಆದೇಶದಲ್ಲಿ ನೀಡಿರುವ ವಿಸ್ತೃತ ವರ್ಗಾವಣಾ ಮಾರ್ಗಸೂಚಿಗಳ ಕಂಡಿಕೆ 5 (1)ರಲ್ಲಿ ಕೆಳಕಂಡಂತೆ ಸ್ಪಷ್ಟವಾದ ಸೂಚನೆಗಳನ್ನು ನೀಡಲಾಗಿರುತ್ತದೆ.

> 5(1) ಯಾವುದೇ ಸರ್ಕಾರಿ ನೌಕರರ ವರ್ಗಾವಣೆಯಾದ ಸಂದರ್ಭಗಳಲ್ಲಿ ಯಾವುದೇ ನೌಕರರು ಸ್ಥಳ ನಿಯುಕ್ತಿಗಾಗಿ ಕಾಯದಂತೆ ಕಡ್ಡಾಯವಾಗಿ ಸ್ಥಳ ನಿಯುಕ್ತಿ ನೀಡತಕ್ಕದ್ದು. ಈ ರೀತಿ ಹಲವಾರು ಸರ್ಕಾರಿ ನೌಕರರು ಸ್ಥಳ ನಿಯುಕ್ತಿಗಾಗಿ ಕಾಯುವುದರಿಂದ ಸರ್ಕಾರಕ್ಕೆ ಅನವಶ್ಯಕ ಆರ್ಥಿಕ ಹೊರೆಯಾಗುತ್ತದೆ ಎಂಬುದನ್ನು ಗಮನದಲ್ಲಿಟ್ಟುಕೊಳ್ಳತಕ್ಕದ್ದು.

ಯಾವುದೇ ನೌಕರರು ಸ್ಥಳ ನಿಯುಕ್ತಿಗಾಗಿ ಕಾಯದಂತೆ ಕಡ್ಡಾಯವಾಗಿ ಸ್ಥಳ ನಿಯುಕ್ತಿ ನೀಡತಕ್ಕದ್ದೆಂದು ಸ್ಪಷ್ಟವಾದ ಸೂಚನೆಗಳನ್ನು ನೀಡಿದ್ದರೂ ಸಹ, ಕೆಲವು ಇಲಾಖೆಗಳಲ್ಲಿ

ಅಧಿಕಾರಿ/ನೌಕರರನ್ನು ವರ್ಗಾಯಿಸಿದಾಗ ಪರ್ಯಾಯ ಹುದ್ದೆಗೆ ಸ್ಥಳನಿಯುಕ್ತಿಗೊಳಿಸದಿರುವುದರಿಂದ ಅಂತಹ ಅಧಿಕಾರಿಗಳು/ನೌಕರರು ಕಡ್ಡಾಯ ನಿರೀಕ್ಷಣೆಗೆ ಬರುವ ಪರಿಸ್ಥಿತಿ ಉಂಟಾಗಿ, ಅವರು ಹುದ್ದೆಯ ಕರ್ತವ್ಯಗಳನ್ನು ನಿರ್ವಹಿಸದಿದ್ದರೂ ಸಹ ಅವರಿಗೆ ವೇತನ ಹಾಗೂ ಭತ್ಯೆಗಳನ್ನು ಪಾವತಿಸುವ ಅನಿವಾರ್ಯತೆ ಉಂಟಾಗುತ್ತಿದೆ. ಇದರಿಂದ ಸಾರ್ವಜನಿಕ ಕೆಲಸಕಾರ್ಯಗಳ ನಿರ್ವಹಣೆಯಲ್ಲಿ ವಿಳಂಬವಾಗುವುದರೊಂದಿಗೆ ಸರ್ಕಾರಕ್ಕೂ ಆರ್ಥಿಕ ನಷ್ಟ ಉಂಟಾಗುತ್ತದೆ.

ಆರ್ಥಿಕ ಇಲಾಖೆಯ ವ್ಯಾಪ್ತಿಗೊಳಪಡುವ ಅಬಕಾರಿ ಇಲಾಖೆಯ ಸೇವೆ ಸೇರಿದ ಅಬಕಾರಿ ಉಪ ಆಯುಕ್ತರಾದ ಶ್ರೀ ಕೆ. ಅರುಣ್ ಕುಮಾರ್ ಇವರಿಗೆ ಸ್ಥಳನಿಯುಕ್ತಿಗೊಳಿಸದೆ ವರ್ಗಾವಣೆ ಮಾಡಿರುವುದನ್ನು ಪ್ರಶ್ನಿಸಿ, ಸದರಿಯವರು ಮಾನ್ಯ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಿಸಿರುವ ರಿಟ್ ಅರ್ಜಿ ಸಂಖ್ಯೆ: 35777/2025 ರ ದಿನಾಂಕ:30.01.2026 ರಂದು ನೀಡಿರುವ ತೀರ್ಪಿನಲ್ಲಿ ಕೆಳಕಂಡಂತೆ ಆದೇಶಿಸಲಾಗಿರುತ್ತದೆ.

(i) xxxxxxx

(ii) The respondents - State shall not transfer an officer/official without providing a posting to him on his transfer.

iii) Directing a transferred officer/official to report before competent authority would not amount to providing posting.

iv) If the State transfers an officer/official without providing any posting to him, then such officer/official who is not provided posting shall not be relieved of his duties in the previous post until he is provided with posting.

v) If an officer/official is transferred without providing him posting and if he is relieved from his previous post, until he is given next posting, salary and allowances paid to such Government servant during his compulsory waiting period shall be recovered forthwith from the officer who is vested with the power to effect such transfer, i.e., the Secretary to Government or Head of the Department or other competent officer, as the case may be.

ಮಾನ್ಯ ನ್ಯಾಯಾಲಯವು ನೀಡಿರುವ ತಿರ್ಪಿನ ಹಿನ್ನೆಲೆಯಲ್ಲಿ, ಯಾವುದೇ ನೌಕರರು ಸ್ಥಳ ನಿಯುಕ್ತಿಗಾಗಿ ಕಾಯದಂತೆ ಕಡ್ಡಾಯವಾಗಿ ಸ್ಥಳ ನಿಯುಕ್ತಿ ನೀಡತಕ್ಕದ್ದೆಂದು ಮತ್ತೊಮ್ಮೆ ಸರ್ಕಾರದ

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**



ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ /ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಸರ್ಕಾರದ ಕಾರ್ಯದರ್ಶಿ ಹಾಗೂ ಇತರೆ ಸಂಬಂಧಿತ ಸಕ್ಷಮ ಪ್ರಾಧಿಕಾರಿಗಳು / ಇಲಾಖಾ ಮುಖ್ಯಸ್ಥರುಗಳಿಗೆ ಸೂಚಿಸಿದೆ. ಒಂದು ವೇಳೆ, ಈ ಸೂಚನೆಗಳನ್ನು ಉಲ್ಲಂಘಿಸಿ ವರ್ಗಾವಣೆಗಳಲ್ಲಿ ಸರ್ಕಾರಿ ನೌಕರರಿಗೆ ಸ್ಥಳನಿಯುಕ್ತಿ ನೀಡದೇ ಕಡ್ಡಾಯ ನಿರೀಕ್ಷಣೆಯಲ್ಲಿರಿಸಿದಲ್ಲಿ, ಮಾನ್ಯ ರಾಜ್ಯ ಉಚ್ಚ ನ್ಯಾಯಾಲಯದ ನಿರ್ದೇಶನದಂತೆ ಆ ಅವಧಿಗೆ ಪಾವತಿಸಲಾದ ವೇತನ ಮತ್ತು ಭತ್ಯೆಯನ್ನು ಸಂಬಂಧಿತ ಸಕ್ಷಮ ಪ್ರಾಧಿಕಾರಗಳಿಂದ ವಸೂಲಿ ಮಾಡಲಾಗುವುದೆಂದು ಸೂಚಿಸಿದೆ.

(ಡಾ. ಶಾಲಿನಿ ರಜನೀಶ್)
ಸರ್ಕಾರದ ಮುಖ್ಯ ಕಾರ್ಯದರ್ಶಿ

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು
THAMMAIAH